# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
**20.03.2026 / 2.30 p.m.**

<><><><>

ಮುಖ್ಯಾಂಶಗಳು

1. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಆಯವ್ಯಯ ಪೂರ್ವಭಾವಿ ಸಭೆ
2. ವಿಶ್ವ ಮೌಖಿಕ ಆರೋಗ್ಯ ದಿನ : ಮೌಖಿಕ ನೈರ್ಮಲ್ಯ ಅಭ್ಯಾಸಗಳನ್ನು ಅಳವಡಿಸಿಕೊಳ್ಳಲು ಕೇಂದ್ರ ಸಚಿವ ಜೆ.ಪಿ.ನಡ್ಡಾ ಕರೆ
3. ಇಂದು ವಿಶ್ವ ಗುಬ್ಬಚ್ಚಿ ದಿನ ; ಗುಬ್ಬಚ್ಚಿ ಸಂತತಿ ಉಳಿಸಲು ಹಲವೆಡೆ ಜಾಗೃತಿ ಅಭಿಯಾನ
4. ವನ್ಯಜೀವಿಗೆ ಚಿಕಿತ್ಸೆ ನೀಡಲು ತೆರಳಿದ್ದ ಪಶುವೈದ್ಯ ನೀರಾನೆ ದಾಳಿಯಿಂದ ಸಾವು - ಪರಿಸರ ಸಚಿವ ಈಶ್ವರ್ ಖಂಡ್ರೆ ಸಂತಾಪ

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ೫ ನಗರ ಪಾಲಿಕೆಗಳ ಪ್ರಸಕ್ತ ಸಾಲಿನ ಆಯವ್ಯಯದ ಪೂರ್ವಭಾವಿ ಸಿದ್ಧತೆ ಕುರಿತು ಬೆಂಗಳೂರಿನ ಶಾಸಕರ ಜತೆ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಭೆ ನಡೆಸಿದ್ದಾರೆ. ಸಚಿವರಾದ ದಿನೇಶ್ ಗುಂಡೂರಾವ್, ಕೃಷ್ಣ ಬೈರೇಗೌಡ, ಜಮೀರ್ ಅಹ್ಮದ್ ಖಾನ್, ಬೈರತಿ ಸುರೇಶ್, ಸಂಸದರು, ಶಾಸಕರು ಸೇರಿದಂತೆ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರರಾವ್, ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್, ಉಪಮುಖ್ಯಮಂತ್ರಿ ಕಾರ್ಯದರ್ಶಿ ರಾಜೇಂದ್ರ ಚೋಳನ್ ಮತ್ತಿತರರು ಭಾಗವಹಿಸಿದ್ದರು.

<><><><>

ವಿಶ್ವ ಮೌಖಿಕ ಆರೋಗ್ಯ ದಿನದ ಸಂದರ್ಭದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ, ಸಾರ್ವಜನಿಕರು ಉತ್ತಮ ಮೌಖಿಕ ನೈರ್ಮಲ್ಯ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಬಾಯಿಯ ಆರೋಗ್ಯ ಕಾಪಾಡಲು ಸರಿಯಾದ ರೀತಿಯಲ್ಲಿ

ಹಲ್ಲುಜ್ಜುವುದು, ಸಕ್ಕರೆಯುಕ್ತ ಆಹಾರಗಳ ನಿಯಂತ್ರಿತ ಸೇವನೆ, ನಿಯಮಿತ ದಂತ ತಪಾಸಣೆ ಮಾಡಿಸಿಕೊಳ್ಳುವಂತಹ ಸರಳ ಅಭ್ಯಾಸಗಳ ಪ್ರಾಮುಖ್ಯತೆಯನ್ನು ಉಲ್ಲೇಖಿಸಿದ್ದಾರೆ.

<><><>

ಗುಬ್ಬಚ್ಚಿಗಳ ಸಂಖ್ಯೆಯಲ್ಲಿನ ತ್ವರಿತ ಕುಸಿತದ ಬಗ್ಗೆ ಜಾಗೃತಿ ಮೂಡಿಸುವ ವಾರ್ಷಿಕ ಪ್ರಯತ್ನವನ್ನು ಗುರುತಿಸಿ ಇಂದು ವಿಶ್ವ ಗುಬ್ಬಚ್ಚಿ ದಿನವನ್ನು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. ಇಕೋ-ಸಿಸ್ ಆಕ್ಷನ್ ಫೌಂಡೇಶನ್‌ನ ಸಹಯೋಗದೊಂದಿಗೆ ೨೦೧೦ ರಲ್ಲಿ ನೇಚರ್ ಫಾರೆವರ್ ಸೊಸೈಟಿ ಆಫ್ ಇಂಡಿಯಾ ಪ್ರಾರಂಭಿಸಿದ ಈ ದಿನವು ಈ ಸಣ್ಣ ಆದರೆ ಮಹತ್ವದ ಪಕ್ಷಿಗಳು ಎದುರಿಸುತ್ತಿರುವ ಹೆಚ್ಚುತ್ತಿರುವ ಬೆದರಿಕೆಗಳನ್ನು ಎತ್ತಿ ತೋರಿಸುತ್ತದೆ. ಮೈಸೂರಿನಲ್ಲಿ ಇಂದು ವಿಶ್ವ ಗುಬ್ಬಚ್ಚಿ ದಿನಾಚರಣೆ ಹಿನ್ನೆಲೆ ಸಾಂಸ್ಕೃತಿಕ ಗುಬ್ಬಚ್ಚಿ ಸಂತತಿಯನ್ನು ಉಳಿಸಿ, ಮುಂದಿನ ಪೀಳಿಗೆಗೆ ಹಸ್ತಾಂತರಿಸುವ ಕುರಿತು ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮೈಸೂರಿನ ಕೆ.ಎಂ.ಪಿ.ಕೆ ಟ್ರಸ್ಟ್ ವತಿಯಿಂದ ಇಂದು ಮಹಾರಾಜ ಕಾಲೇಜು ಮೈದಾನದ ಮುಂಭಾಗದ ರಸ್ತೆಯಲ್ಲಿ 'ಗುಬ್ಬಚ್ಚಿ ಹಬ್ಬ'ವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಪಕ್ಷಿಗಳಿಗೆ ನೀರಿನ ಬೌಲ್‌ಗಳನ್ನು ಅಳವಡಿಸಿ, ಆಹಾರ ನೀಡುವ ಮೂಲಕ ಕಾರ್ಯಕ್ರಮಕ್ಕೆ ಮೃಗಾಲಯದ ಮಾಜಿ ಅಧ್ಯಕ್ಷರಾದ ಎಲ್.ಆರ್. ಮಹದೇವಸ್ವಾಮಿ ಅವರು ಚಾಲನೆ ನೀಡಿದರು, ನಂತರ ಮಾತನಾಡಿದ ಅವರು, ಅಳಿವಿನಂಚಿನಲ್ಲಿರುವ ಗುಬ್ಬಿ ಸಂತತಿಯನ್ನು ರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದು ಕರೆ ನೀಡಿದರು.

<><><>

ಶಿವಮೊಗ್ಗದ ತಾವರೆಕೊಪ್ಪ ಮೃಗಾಲಯದಲ್ಲಿ ವನ್ಯಜೀವಿಗೆ ಚಿಕಿತ್ಸೆ ನೀಡಲು ತೆರಳಿದ್ದ ಪಶುವೈದ್ಯೆ ಡಾ.ಸಮೀಕ್ಷಾ ರೆಡ್ಡಿ ನೀರಾನೆ ದಾಳಿಯಿಂದ ಮೃತಪಟ್ಟಿದ್ದು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಸಂತಾಪ ಸೂಚಿಸಿದ್ದಾರೆ. ಇದೊಂದು ದುರದೃಷ್ಟಕರ ಘಟನೆ ಎಂದು ಶೋಕ ವ್ಯಕ್ತಪಡಿಸಿರುವ ಅವರು, ಈ ದುಃಖದ ಸಂದರ್ಭದಲ್ಲಿ ಮೃತ ವೈದ್ಯರ ಕುಟುಂಬದೊಂದಿಗೆ ಸರ್ಕಾರ ನಿಲ್ಲುತ್ತದೆ. ಪ್ರತಿಯೊಂದು ಜೀವವೂ ಅಮೂಲ್ಯ. ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬಕ್ಕೆ ದೇವರು ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ಮೃತ ಯುವ ವೈದ್ಯೆಯ ಕುಟುಂಬದವರಿಗೆ ನಿಯಮಾನುಸಾರ ಕೂಡಲೇ ಪರಿಹಾರ ನೀಡುವಂತೆ ಸೂಚಿಸಿರುವ ಅವರು, ರಾಜ್ಯದ ಎಲ್ಲ ಮೃಗಾಲಯಗಳಲ್ಲಿರುವ ಪಶುವೈದ್ಯರು ಯಾವುದೇ ವನ್ಯಜೀವಿಗೆ ಚಿಕಿತ್ಸೆ

ನೀಡುವಾಗ ಪ್ರಮಾಣಿತ ಮಾನದಂಡ ಪಾಲಿಸಬೇಕೆಂದು ಸ್ಪಷ್ಟಪಡಿಸಿದ್ದಾರೆ. ಈ ದುರಂತದ ಬಗ್ಗೆ ಹಿರಿಯ ಪಶುವೈದ್ಯರು ಹಾಗೂ ಅರಣ್ಯಾಧಿಕಾರಿಗಳನ್ನು ಒಳಗೊಂಡ ತಂಡದಿಂದ ತನಿಖೆ ಮಾಡಿಸಿ, ೭ ದಿನಗಳ ಒಳಗಾಗಿ ವರದಿ ನೀಡುವಂತೆಯೂ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

<><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಮತದಾನದ ಪ್ರಮಾಣವನ್ನು ಗಣನೀಯವಾಗಿ ಹೆಚ್ಚಿಸಲು ಜಿಲ್ಲಾ ಪಂಚಾಯತ್ ವತಿಯಿಂದ ವ್ಯಾಪಕ ಜಾಗೃತಿ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲ ರಾವ್ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ೨೦೨೩ರ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಶೇಕಡಾ ೭೦.೪೧ ರಷ್ಟು ಮತದಾನವಾಗಿತ್ತು. ಈ ಪ್ರಮಾಣವನ್ನು ಪ್ರಸಕ್ತ ಉಪ ಚುನಾವಣೆಯಲ್ಲಿ ಕನಿಷ್ಠ ಶೇಕಡಾ ೬೦ ರಿಂದ ೬೫ ಕ್ಕೆ ಏರಿಸುವ ಗುರಿಯನ್ನು ಜಿಲ್ಲಾ ಸ್ವೀಪ್ ಸಮಿತಿ ಹೊಂದಿದೆ ಎಂದು ಅವರು ವಿವರಿಸಿದರು. ಜಿಲ್ಲೆಯ ಮತದಾನದ ಮಾದರಿಯನ್ನು ವಿಶ್ಲೇಷಿಸಿದಾಗ, ಗ್ರಾಮೀಣ ಭಾಗದಲ್ಲಿ ಶೇಕಡಾ ೮೦ ಕ್ಕಿಂತ ಹೆಚ್ಚು ಮತದಾನವಾಗುತ್ತಿದ್ದರೆ, ನಗರ ಪ್ರದೇಶಗಳಲ್ಲಿ ಶೇಕಡಾ ೪೬ ರಿಂದ ೫೨ ರ ಆಸುಪಾಸಿನಲ್ಲಿದೆ. ಸುಶಿಕ್ಷಿತ ನಾಗರಿಕರು ಮತದಾನ ಪ್ರಕ್ರಿಯೆಯಿಂದ ದೂರ ಉಳಿಯುವ 'ನಗರ ಪ್ರದೇಶದ ನಿರಾಸಕ್ತಿ' ಹರ್ಬಲ್ ಅಪತಿ ಕಲ್ಪನೆ ಹೋಗಲಾಡಿಸುವುದು ನಮ್ಮ ಮುಂದಿರುವ ಪ್ರಮುಖ ಸವಾಲಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

<><><>

ಭೂತಾರಾಧನೆಯ ಮೇಲೆ ಆಗಿರುವಷ್ಟು ಉತ್ತಮ ಅಧ್ಯಯನ ಮತ್ತು ಪುಸ್ತಕ ಪ್ರಕಟಣೆ ಭಾರತ ಅಥವಾ ದಕ್ಷಿಣ ಏಷ್ಯಾದ ಬೇರೆ ಯಾವ ಜನಪದ ಪ್ರಕಾರದಲ್ಲೂ ನಡೆದಿಲ್ಲ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಅಭಿಪ್ರಾಯಪಟ್ಟರು. ಮಂಗಳೂರಿನಲ್ಲಿಂದು ನಡೆದ ಕಾರ್ಯಕ್ರಮದಲ್ಲಿ 'ಉಲ್ಲಾಕುಲು: ಆರಾಧನೆ ಅನನ್ಯತೆ' ಸಂಶೋಧನಾ ಗ್ರಂಥವನ್ನು ಅನಾವರಣಗೊಳಿಸಿ ಮಾತನಾಡಿದ ಅವರು, ಡಾ.ಪೂವಪ್ಪ ಕಣಿಯೂರು ಉಲ್ಲಾಕುಲು ಎಂಬ ಒಂದು ಭೂತದ ಮೇಲೆ ಸೂಕ್ಷ್ಮ, ಪರಿಪೂರ್ಣ ಮತ್ತು ಪ್ರೌಢವಾದ ಅಧ್ಯಯನ ನಡೆಸಿದ್ದಾರೆ. ಇದು ಬರೀ ಭೂತಾರಾಧನೆಯ ಅಧ್ಯಯನ ಮಾತ್ರವಲ್ಲ. ಪ್ರಾದೇಶಿಕ ಅಧ್ಯಯನವೂ ಆಗಿದೆ. ಆದ್ದರಿಂದ ಈವರೆಗೆ ಬಂದ ಭೂತಾರಾಧನೆಯ ಕೃತಿಗಳಿಗಿಂತ ಭಿನ್ನವಾಗಿ ನಿಲ್ಲುತ್ತದೆ ಎಂದರು. ಸಂಶೋಧನಾ

ಗ್ರಂಥ ಬರೆದು ಮುಗಿದ ತಕ್ಷಣ ಪುಸ್ತಕ ವಾಗಿ ಪ್ರಕಟಿಸುವುದು ಅಪಾಯಕಾರಿ. ಅದನ್ನು ತಿದ್ದಿತೀಡಿ, ಕಾಲದ ಸುದೀರ್ಘ ಓಟದಲ್ಲಿ ಪಕ್ವಗೊಂಡ ಬಳಿಕ ಪರಿಷ್ಕರಿಸುವುದು ಸರಿಯಾದ ಕೆಲಸ. ಅದನ್ನು ಪೂವಪ್ಪ ಕಣಿಯೂರು ಮಾಡಿದ್ದಾರೆ. ಕನ್ನಡದಲ್ಲಿ ಪುಸ್ತಕ ಪ್ರಕಟವಾಗುವಷ್ಟು ಚಂದ ಭಾರತದ ಯಾವ ಭಾಷೆಯಲ್ಲೂ ಇಲ್ಲ ಎಂದವರು ಹೇಳಿದರು.

<><><>

ಇದೇ ೨೩ರಿಂದ ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ನಡೆಯಲಿರುವ ವಿಶ್ವ ವಿಖ್ಯಾತ ವೈರಮುಡಿ ಬ್ರಹ್ಮೋತ್ಸವದಲ್ಲಿ ಯಾವುದೇ ಲೋಪದೋಷಗಳಾಗದಂತೆ, ಭಕ್ತರಿಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಸೂಕ್ತ ಕ್ರಮ ವಹಿಸಬೇಕೆಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ. ಮೇಲುಕೋಟೆ ಪ್ರವಾಸಿ ಮಂದಿರದಲ್ಲಿ ನಡೆದ ಮೇಲುಕೋಟೆಯ ಐತಿಹಾಸಿಕ ವೈರಮುಡಿ ಬ್ರಹ್ಮೋತ್ಸವದ ಪೂರ್ವಭಾವಿ ಸಿದ್ಧತೆಗಳ ಕುರಿತು ಮಾತನಾಡಿದ ಅವರು, ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆಯಿರುವುದರಿಂದ ಕಟ್ಟುನಿಟ್ಟಿನ ಭದ್ರತೆ, ಸುಗಮ ಜನಸಂದಣಿ ನಿರ್ವಹಣೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಗೆ ಆದ್ಯತೆ ನೀಡಲು ಸೂಚಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕುಮಾರ್ ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ಮಾರ್ಚ್ ೨೮ ರಂದು ನಡೆಯುವ ವಿಶ್ವವಿಖ್ಯಾತ ವೈರಮುಡಿ ಬ್ರಹ್ಮೋತ್ಸವದ ಅದ್ದೂರಿ ಉತ್ಸವದಲ್ಲಿ ಭಕ್ತಾದಿಗಳಿಗೆ ದರ್ಶನಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವಂತೆ ಬ್ಯಾರಿಕೆಡ್ ವ್ಯವಸ್ಥೆ ಅಳವಡಿಸಬೇಕು ಹೇಳಿದ್ದಾರೆ. ಏಪ್ರಿಲ್ ೧ ರಂದು ಮೇಲುಕೋಟೆಯ ಪುರಾಣ ಪ್ರಸಿದ್ಧ ಪಂಚ ಕಲ್ಯಾಣಿಯಲ್ಲಿ ತೆಪ್ಪೋತ್ಸವ ನಡೆಯುವುದರಿಂದ ಕಲ್ಯಾಣಿಯನ್ನು ವೀಕ್ಷಣೆ ಮಾಡಿ ಭಕ್ತಾದಿಗಳಿಗೆ ತೊಂದರೆಯಾಗದಂತೆ ಸೂಕ್ತ ಕ್ರಮ ವಹಿಸಬೇಕೆಂದು ಹೇಳಿದ್ದಾರೆ.

<><><>

ಉತ್ತರ ಕನ್ನಡ ಜಿಲ್ಲೆಯ ಅಡಿಕೆ ಹಾಗೂ ಕಾಳುಮೆಣಸು ಬೆಳೆಗಾರರು ಬಹುದಿನಗಳಿಂದ ನಿರೀಕ್ಷಿಸುತ್ತಿದ್ದ 'ಹವಾಮಾನ ಆಧಾರಿತ ಬೆಳೆ ವಿಮೆ'ಯ ಎರಡನೇ ಕಂತಿನ ಮೊತ್ತವು ಇಂದಿನಿಂದ ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಜಮೆಯಾಗಲು ಪ್ರಾರಂಭವಾಗಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ತಾಂತ್ರಿಕ ಕಾರಣಗಳಿಂದ ವಿಳಂಬವಾಗಿದ್ದ ಬಾಕಿ ವಿಮಾ ಮೊತ್ತವು ಈಗ ಅರ್ಹ ಫಲಾನುಭವಿ ರೈತರಿಗೆ ಹಂತ ಹಂತವಾಗಿ ಬಿಡುಗಡೆಯಾಗುತ್ತಿದೆ. ಈ ಪ್ರಕ್ರಿಯೆಯು ಇಂದಿನಿಂದ ಸತತವಾಗಿ ಮುಂದುವರಿಯಲಿದ್ದು, ನೇರ ನಗದು ವರ್ಗಾವಣೆ (ಆಃಖಿ)

ಮೂಲಕ ರೈತರ ಖಾತೆಗಳನ್ನು ತಲುಪಲಿದೆ. ಇದು ಜಿಲ್ಲೆಯ ಕೃಷಿಕ ಕುಟುಂಬಗಳಲ್ಲಿ ಯುಗಾದಿ ಹಬ್ಬದ ಸಂಭ್ರಮವನ್ನು ಇಮ್ಮಡಿಗೊಳಿಸಿದೆ. ಜಿಲ್ಲೆಯ ಅಡಿಕೆ ಬೆಳೆಗಾರರು ಈಗಾಗಲೇ ಎಲೆ ಚುಕ್ಕಿ ರೋಗದ ಬಾಧೆ ಮತ್ತು ಇಳುವರಿ ಕುಂಠಿತದಿಂದಾಗಿ ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದರು. ಇಂತಹ ಕಠಿಣ ಸಮಯದಲ್ಲಿ ಬಾಕಿ ಇದ್ದ ವಿಮೆ ವಿತರಣೆ ಆರಂಭವಾಗಿರುವುದು ಜಿಲ್ಲೆಯ ಕೃಷಿಕರಲ್ಲಿ ನೆಮ್ಮದಿಯ ನಿಟ್ಟುಸಿರು ಬಿಡುವಂತೆ ಮಾಡಿದೆ. ಜಿಲ್ಲೆಯ ಪ್ರತಿಯೊಬ್ಬ ಅರ್ಹ ರೈತರಿಗೂ ಈ ವಿಮೆಯ ಸೌಲಭ್ಯ ಹಂತ ಹಂತವಾಗಿ ತಲುಪಲಿದ್ದು, ಸಂಕಷ್ಟದ ಸಮಯದಲ್ಲಿ ಇದು ರೈತರಿಗೆ ದೊಡ್ಡ ಆಸರೆಯಾಗಲಿದೆ ಎಂದು ಸಂಸದ ಕಾಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಉದ್ಯೋಗಿಗಳ ಕಲ್ಯಾಣ ಹಾಗೂ ಸಮಾವೇಶಾತ್ಮಕ ಕೆಲಸದ ವಾತಾವರಣ ನಿರ್ಮಿಸುವ ಬದ್ಧತೆಯ ಭಾಗವಾಗಿ, ನೈರುತ್ಯ ರೈಲ್ವೆಯ ಮೈಸೂರು ವಿಭಾಗವು ಮೈಸೂರು ವಿಭಾಗೀಯ ಕಛೇರಿ ಆವರಣದಲ್ಲಿ ರೈಲ್ವೆ ಉದ್ಯೋಗಿಗಳ ಮಕ್ಕಳಿಗಾಗಿ ಹಗಲು ಆರೈಕೆ ಕೇಂದ್ರವನ್ನು ಆರಂಭಿಸಿದೆ. ಈ ಸೌಲಭ್ಯವು ಮುಖ್ಯವಾಗಿ ಮೈಸೂರು ಮುಖ್ಯಾಲಯ ಪ್ರದೇಶದಲ್ಲಿ ಕಾರ್ಯನಿರ್ವಹಿಸುವ ರೈಲ್ವೆ ಉದ್ಯೋಗಿಗಳ ಮಕ್ಕಳಿಗೆ ಸುರಕ್ಷಿತ, ಭದ್ರ ಹಾಗೂ ಬೆಂಬಲಕಾರಿ ವಾತಾವರಣವನ್ನು ಒದಗಿಸುವ ಉದ್ದೇಶ ಹೊಂದಿದೆ. ಈ ಕೇಂದ್ರವನ್ನು ಗುಂಟೂರು ವಿಭಾಗದ ಡಿಆರ್‌ಎಂ ಹಾಗೂ ನೈರುತ್ಯ ರೈಲ್ವೆ ಮಹಿಳಾ ಕಲ್ಯಾಣ ಸಂಘದ ಅಧ್ಯಕ್ಷರಾದ ಸುಧೇಷ್ಣಾ ಸೇನ್, ಅವರು ಆನ್‌ಲೈನ್ ಮೂಲಕ ಉದ್ಘಾಟಿಸಿದರು. ಮೈಸೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಮುದಿತ್ ಮಿತ್ತಲ್ ಅವರು ಸ್ಥಳದಲ್ಲೇ ರಿಬ್ಬನ್ ಕತ್ತರಿಸುವ ಮೂಲಕ ಆರೈಕೆ ಕೇಂದ್ರವನ್ನು ಉದ್ಘಾಟಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>